ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019–20ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20–09–2019 ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ "Comprehensive Development of Roads, Drains, Special repairs to buildings and other works in Sunnadagoodu, Ambedkarnagar, Mohan Kumar nagar, Poornapura, Ramabhovi Colony, Jalahalli Harijana, Siddarthanagar, Khathanagar, Ashrayanagar, Karadigudi, Peenya 4th block A K Colony and Surrounding areas of Slums in RR Nagar Constituency under PACKAGE-2019-20 RRN-DIV-(13)" ಪ್ಯಾಕೇಜಿನ ಅಂದಾಜು ಮೊತ್ತ ರೂ.10.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20–09–2019.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆಯುಕ್ತರು/ಪಿಆರ್/3689/2020–21, ದಿನಾಂಕ: 29–09–2020.
3. ದಿನಾಂಕ: 29–01–2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 20–09–2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01–02–2019 ರಂತೆ ಅನುಮೋದಿಸಿದ್ದ, "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ"ಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ–02ರ ಕ್ರಮ ಸಂಖ್ಯೆ: 1946 ರ ಕಾಮಗಾರಿಗೆ ಒಟ್ಟು ರೂ.10.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 29–09–2020ರ ಪತ್ರದಲ್ಲಿ, ಬಿಬಿಎಂಪಿ ಆಯುಕ್ತರು, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20–09–2019ರಲ್ಲಿ ಅನುಮೋದನೆಯಾಗಿರುವ ಕ್ರಿಯಾ ಯೋಜನೆಯ ಅನುಬಂಧ–2 ರ ಕ್ರಮ ಸಂಖ್ಯೆ: 1946, 1947 ಮತ್ತು 114 ರಲ್ಲಿ ಅನುದಾನ ಲಭ್ಯವಿರುತ್ತದೆ. ಯೋಜನೆಗಳನ್ನು ಅನುಷ್ಠಾನಗೊಳಿಸಲು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಳ ತಾಂತ್ರಿಕ ಮತ್ತು ಆರ್ಥಿಕ ಮೌಲ್ಯಮಾಪನ ಹಾಗೂ ದರ ಸಂಧಾನವನ್ನು ನಡೆಸಲಾಗಿರುತ್ತದೆ. ಯೋಜನೆಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಸಂಧಾನಿತ ಟೆಂಡರ್‌ಗಳಿಗೆ ಅನುಮೋದನೆ ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

. . .2/-

Scanned with CamScanner

"Comprehensive Development of Roads, Drains, Special repairs to buildings and other works in Sunnadagoodu, Ambedkarnagar, Mohan Kumar nagar, Poornapura, Ramabhovi Colony, Jalahalli Harijana, Siddarthanagar, Khathanagar, Ashrayanagar, Karadigudi, Peenya 4th block A K Colony and Surrounding areas of Slums in RR Nagar Constituency under PACKAGE-2019-20 RRN-DIV-(13)" ಕಾಮಗಾರಿಗೆ ರೂ.1000.00ಲಕ್ಷಗಳ ಅಂದಾಜು ಮೊತ್ತಕ್ಕೆ ಟೆಂಡರ್ ಪ್ರಕಟಣೆ ಸಂಖ್ಯೆ: RRND/EE/Tend/21/2019-20, ದಿನಾಂಕ: 04-03-2020 ರಂದು ಟೆಂಡರ್ ಕರೆಯಲಾಗಿದ್ದು, ಟೆಂಡರ್‌ಗಿಟ್ಟ ಮೊತ್ತ ರೂ.8,31,56,164.02 ಗಳಾಗಿದ್ದು, ದಿನಾಂಕ: 05-03-2020 ರಂದು ಪ್ರಜಾವಾಣಿ ಮತ್ತು ಟೈಮ್ಸ್ ಆಫ್ ಇಂಡಿಯಾ ದಿನಪತ್ರಿಕೆಗಳಲ್ಲಿ ಪ್ರಕಟಣೆ ನೀಡಲಾಗಿದ್ದು, ದಿನಾಂಕ: -3004-2020 ಟೆಂಡರ್ ಸಲ್ಲಿಸಲು ಅಂತಿಮ ದಿನಾಂಕವಾಗಿರುತ್ತದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಮೇಲ್ಕಂಡ ಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019, ಅನುಮೋದಿತ ಕ್ರಿಯಾ ಯೋಜನೆ ಅನುಬಂಧ-2 ರ ಕ್ರಮ ಸಂಖ್ಯೆ: 1946 ರಲ್ಲಿ ರೂ.1,000.00 ಲಕ್ಷಗಳ ಅನುದಾನ ಒದಗಿಸಿದ್ದು, ದ್ವಿ-ಲಕೋಟೆ ತಾಂತ್ರಿಕ ಟೆಂಡರ್‌ನಲ್ಲಿ ಗುತ್ತಿಗೆದಾರರು ಸಲ್ಲಿಸಿರುವ ದಾಖಲೆಗಳನ್ವಯ ದಿನಾಂಕ: 11-08-2020 ರ ತಾಂತ್ರಿಕ ಮೌಲ್ಯಮಾಪನ/ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನ ಸಮಿತಿಯ ತೀರ್ಮಾನದಂತೆ ಆರ್ಥಿಕ ಬಿಡ್‌ನ್ನು ದಿನಾಂಕ: 02-09-2020 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತದೆ.

ಕ್ರ ಸಂ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಟೆಂಡರ್‌ಗಿಟ್ಟ ಮೊತ್ತ (2018-19ನೇ ಸಾಲಿನ ಲೋ.ಇ. ದರಪಟ್ಟಿ ದರಗಳಂತೆ (ರೂ. ಗಳಲ್ಲಿ)	ಚಾಲ್ತಿ ದರಗಳಿಗೆ ಹೋಲಿಸಿದಾಗ (2018-19ನೇ ಸಾಲಿನ ಲೋ.ಇಲಾಖೆಯ ದಿ: 01-07-2020ರ ಪರಿಷ್ಕೃತ ದರ (Issue Rates) ಗಳಂತೆ ಟೆಂಡರ್‌ಗಿಟ್ಟ ಮೊತ್ತ (ರೂ. ಗಳಲ್ಲಿ)	ಗುತ್ತಿಗೆದಾರರು ನಮೂದಿಸಿರುವ ಮೊತ್ತ. (ರೂ.ಗಳಲ್ಲಿ)	2018-19ನೇ ಸಾಲಿನ ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇಕಡವಾರು	ಪ್ರಸಕ್ತ 2018-19ನೇ ಸಾಲಿನ ಚಾಲ್ತಿ ಲೋ.ಇ ದರಪಟ್ಟಿಯ ದಿ: 01-07-2020ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡವಾರು	ಷರಾ
1	ಶ್ರೀ ನಾಗಿನೇನಿ ಮುನಿಸ್ವಾಮಿ ನಾಯ್ಡು ಕೃಷ್ಣಮೂರ್ತಿ	8,31,56,164.02	8,24,98,384.99	9,07,88,892.82	ಶೇ.9.18%	ಶೇ.10.05% ಹೆಚ್ಚು	ಎಲ್-1
2	ಶ್ರೀ ಅಬ್ಬು ಸಾಂಬಶಿವ ರೆಡ್ಡಿ			9,39,49,319.71	ಶೇ.12.98%	ಶೇ.13.88ಹೆಚ್ಚು	ಎಲ್-2

ಎಲ್-1 ಬಿಡ್‌ದಾರರಾದ ಶ್ರೀ ನಾಗಿನೇನಿ ಮುನಿಸ್ವಾಮಿ ನಾಯ್ಡು ಕೃಷ್ಣಮೂರ್ತಿ ರವರು ನಮೂದಿಸಿರುವ ಮೊತ್ತ ರೂ.9,07,88,892.82 (ಶೇ.12 ರಷ್ಟು ಜಿಎಸ್‌ಟಿ ಹೊರತುಪಡಿಸಿ) ಗಳನ್ನು ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇ.9.18 ರಷ್ಟು ಹೆಚ್ಚು ಮತ್ತು ಪ್ರಸಕ್ತ ಚಾಲ್ತಿ ದರಪಟ್ಟಿ 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆ ಬೆಂಗಳೂರು ವೃತ್ತದ ದಿನಾಂಕ: 01-07-2020ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇ.10.05 ರಷ್ಟು ಹೆಚ್ಚಿನ ದರವಾಗಿದ್ದ ಹಿನ್ನೆಲೆಯಲ್ಲಿ, ಎಲ್-1 ಬಿಡ್‌ದಾರರಾದ ಶ್ರೀ ನಾಗಿನೇನಿ ಮುನಿಸ್ವಾಮಿ ನಾಯ್ಡು ಕೃಷ್ಣಮೂರ್ತಿ

. . .3/-

Scanned with CamScanner

ರವರೊಂದಿಗೆ ದರ ಸಂಧಾನ ಕೈಗೊಂಡು ಟೆಂಡರ್‌ನಲ್ಲಿ ಸಮೂದಿಸಿರುವ ದರಗಳನ್ನು ಕಡಿಮೆ ಮಾಡಲು ಕೂಟಿಸಿದ್ದರ ಮೇರೆಗೆ ಬಿಡ್ದುದಾರರು ಹಾಲಿ ನಮೂದಿಸಿರುವ ರೂ.9,07,88,892.82 (ಶೇ.12 ರಷ್ಟು ಜಿಎಸ್‌ಟಿ ಹೊರತುಪಡಿಸಿ) ಗಳ ಬದಲಾಗಿ ರೂ.8,64,82,408.00 (ಶೇ.12 ರಷ್ಟು ಜಿಎಸ್‌ಟಿ ಹೊರತುಪಡಿಸಿ) ಗಳಿಗೆ ಸಧಾನಿತ ದರ ಸಲ್ಲಿಸಿರುತ್ತಾರೆ. ಸದರಿ ಸಂಧಾನಿತ ದರ ಮೊತ್ತ ರೂ.8,64,82,408.00 (ಶೇ.12 ರಷ್ಟು ಜಿಎಸ್‌ಟಿ ಹೊರತುಪಡಿಸಿ) ಗಳನ್ನು ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇ.4.83 ರಷ್ಟು ಹೆಚ್ಚಿನ ದರವಾಗಿದ್ದು, ಸಂಧಾನಿತ ಟೆಂಡರ್ ಬಗ್ಗೆ ತೀರ್ಮಾನ ಕೈಗೊಳ್ಳಲು ಸರ್ಕಾರದ ಮಟ್ಟದ ಟೆಂಡರ್ ಅಂಗೀಕಾರ ಸಮಿತಿಯ ಮುಂದೆ ಮಂಡಿಸುವುದು ಸೂಕ್ತವೆಂದು ಸರ್ವಾನುಮತದಿಂದ ತೀರ್ಮಾನಿಸಲಾಯಿತು ಎಂದು ತಿಳಿಸುತ್ತಾ ಸದರಿ ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಸಂಧಾನಿತ ಟೆಂಡರ್ ಮೊತ್ತಕ್ಕೆ ಅನುಮೋದನೆ ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 29-01-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಆಯುಕ್ತರ ದಿನಾಂಕ: 29-09-2020ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ "Comprehensive Development of Roads, Drains, Special repairs to buildings and other works in Sunnadagoodu, Ambedkarnagar, Mohan Kumar nagar, Poornapura, Ramabhovi Colony, Jalahalli Harijana, Siddarthanagar, Khathanagar, Ashrayanagar, Karadigudi, Peenya 4th block A K Colony and Surrounding areas of Slums in RR Nagar Constituency under PACKAGE-2019-20 RRN-DIV-(13)" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Nagineni Muniswamy Naidu Krishnamurthy ರವರ ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.8,31,56,164.02 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.8,39,87,725.66 ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 29-01-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 271 ಎಂಎನ್‌ವೈ 2020
ಬೆಂಗಳೂರು, ದಿನಾಂಕ: 24-02-2021.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಯ ಅನುಬಂಧ-2 ರ ಕ್ರ.ಸಂ.1946ರ ಕಾಮಗಾರಿಯನ್ನೊಳಗೊಂಡು ಮಾಡಲಾಗಿರುವ "Comprehensive Development of Roads, Drains, Special repairs to buildings and other works in Sunnadagoodu, Ambedkarnagar, Mohan Kumar nagar, Poornapura, Ramabhovi Colony, Jalahalli Harijana, Siddarthanagar, Khathanagar, Ashrayanagar, Karadigudi, Peenya 4th block A K Colony and Surrounding areas of Slums in RR

. . .4/-

Scanned with CamScanner

Nagar Constituency under PACKAGE-2019-20 RRN-DIV-(13)" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ದಿನಾಂಕ: 29-01-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Nagineni Muniswamy Naidu Krishnamurthy ರವರ ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.8,31,56,164.02 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.8,39,87,725.66 (ಎಂಟು ಕೋಟಿ ಮೂವತ್ತೊಂಭತ್ತು ಲಕ್ಷದ ಎಂಬತ್ತೇಳು ಸಾವಿರದ ಏಳುನೂರ ಇಪ್ಪತ್ತೈದು ರೂಪಾಯಿಗಳು ಮತ್ತು ಅರವತ್ತಾರು ಪೈಸೆಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 29-01-2021ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

. . . 5/-

Scanned with CamScanner

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner